ಅ) 1993-94ನೇ ಸಾಲಿನಲ್ಲಿ 10 ತಾಲ್ಲೂಕು ಮಟ್ಟದ ಕ್ರೀಡಾಂಗಣಗಳನ್ನು ಪ್ರಾರಂಭಿಸಲಾಗಿದೆ.

ಆ) 4 ತಾಲ್ಲೂಕು ಮಟ್ಟದ ಕ್ರೀಡಾಂಗಣವನ್ನು ಪ್ರಾರಂಭಿಸಲಾಗಿದೆ.

ಇ) 6.23 ಗುಂಟೆ ಜಮೀನನ್ನು ಇಲಾಖೆಯ ವಶಕ್ಕೆ ತೆಗೆದುಕೊಳ್ಳಲಾಗಿದೆ.

ಈ) ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದ ಕೂಡಲೇ ಕ್ರೀಡಾಂಗಣ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುವುದು.

ರಾಜ್ಯದಲ್ಲಿ ಐ.ಎ.ಎಸ್. ಅಧಿಕಾರಿಗಳು ಕನ್ನಡದಲ್ಲಿ ವ್ಯವಹರಿಸುತ್ತಿರುವ ಕ್ರಮಗಳೇನು

641 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ವಾರ್ತಾ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಐ.ಎ.ಎಸ್. ಅಧಿಕಾರಿಗಳು ಕನ್ನಡದಲ್ಲಿ ವ್ಯವಹರಿಸುವುದಿಲ್ಲವೆಂಬ ದೂರು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ರಾಜ್ಯದಲ್ಲಿ ಕನ್ನಡ ಮಾತೃ ಭಾಷೆಯಲ್ಲದ ಎಷ್ಟು ಐ.ಎ.ಎಸ್. ಅಧಿಕಾರಿಗಳಿದ್ದಾರೆ ಹಾಗೂ ಅಂಥವರಿಗೆ ಕನ್ನಡ ಕಲಿಯಲು ಎಷ್ಟನೇ ತರಗತಿಯ ಪುಸ್ತಕ ನಿಗದಿಪಡಿಸಲಾಗಿದೆ?*

ಇ) *ಐ.ಎ.ಎಸ್. ಅಧಿಕಾರಿಗಳು ಸರಿಯಾಗಿ ಕನ್ನಡ ಕಲಿಯುವ ಬಗ್ಗೆ ಅವರು ಎದುರಿಸಬೇಕಾದ ಪರೀಕ್ಷಾ ಮಟ್ಟವನ್ನು ವಿಸ್ತರಿಸಿ ಎಸ್.ಎಸ್.ಎಲ್.ಸಿ. ಮಟ್ಟಕ್ಕೆ ತರುವ ವಿಷಯ ಸರ್ಕಾರದ ಮುಂದಿದೆಯೇ?*

ಶ್ರೀ ಆರ್.ಎನ್. ನಾಯ್ಕ (ವಾರ್ತಾ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು):

ಅ) ನಿರ್ದಿಷ್ಟವಾದ ದೂರುಗಳು ಬಂದಿಲ್ಲ

ಆ) ಕನ್ನಡ ಮಾತೃಭಾಷೆಯಲ್ಲದ ಐಎಎಸ್ ಅಧಿಕಾರಿಗಳ ಸಂಖ್ಯೆ : 145
ಕನ್ನಡ ಪ್ರಾಥಮಿಕ 4ನೇ ತರಗತಿಯ ಪುಸ್ತಕ.

ಇ) ಹೌದು.

ಸೇಡಂ ಕ್ಷೇತ್ರದಲ್ಲಿ ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಕಾಮಗಾರಿ ಕೆಲಸ

295 - ಶ್ರೀ ಬಸವಂತರೆಡ್ಡಿ ಮೋತಕಪಲ್ಲಿ (ಸೇಡಂ) : ಮಾನ್ಯ ಸಣ್ಣ ಉಳಿತಾಯ, ಲಾಟರಿ, ಕೆ.ಜಿ.ಐ.ಡಿ. ಹಾಗೂ ಹೆಚ್.ಕೆ.ಡಿ.ಬಿ. ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗುಲ್ಬರ್ಗಾ ಜಿಲ್ಲೆಯ ಸೇಡಂ ಕ್ಷೇತ್ರದ ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಯೋಜನೆಯಡಿಯಲ್ಲಿ 1993-94ನೇ ಸಾಲಿನಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳ ಕ್ರಿಯಾ ಯೋಜನೆಯನ್ನು ಜಿಲ್ಲಾ ಪಂಚಾಯಿತಿಗೆ ಮಂಜೂರು ಮಾಡಲು ಮುಖ್ಯಮಂತ್ರಿಗಳು ಆದೇಶ ನೀಡಿದರೂ ಸಹ ಜೂನ್ ಅಂತಿಮದವರೆಗೆ ಸದರೀ ಕಾಮಗಾರಿಗಳನ್ನು ಪ್ರಾರಂಭ ಮಾಡದಿರಲು ಕಾರಣವೇನು?*

ಆ) *ಹಾಗಿದ್ದಲ್ಲಿ ಎಂದು ಪ್ರಾರಂಭ ಮಾಡಲಾಗುವುದು?*

ಶ್ರೀ ಮದನಗೋಪಾಲ ನಾಯಕ್ (ಸಣ್ಣ ಉಳಿತಾಯ, ಲಾಟರಿ, ಕೆ.ಜಿ.ಐ.ಡಿ. ಹಾಗೂ ಹೆಚ್.ಕೆ.ಡಿ.ಬಿ. ರಾಜ್ಯ ಸಚಿವರು) :

ಅ) ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿಯಡಿಯಲ್ಲಿ 1993-94ನೇ ಸಾಲಿಗೆ ಸೇಡಂ ಕ್ಷೇತ್ರದ ಶಾಸಕರು ಕೊಟ್ಟಿದ್ದ ಕಾಮಗಾರಿಯ ಪಟ್ಟಿಯನ್ನು ಬದಲಾವಣೆ ಮಾಡಿದ್ದರಿಂದ, ಈ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಲಿಲ್ಲ.

ಆ) ಬದಲಾವಣೆಗೆ ಪ್ರಸ್ತಾಪಿಸಿರುವ ಕಾಮಗಾರಿಗಳನ್ನು ಮಂಜೂರು ಮಾಡಿದ ನಂತರ ಅವುಗಳನ್ನು ಪ್ರಾರಂಭ ಮಾಡಲಾಗುವುದು.

ದಕ್ಷಿಣ ಕನ್ನಡ ಜಿಲ್ಲೆಯ ನರಹರಿ ಬೆಟ್ಟವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಮಾಡುವುದು

368 - ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ) : ಮಾನ್ಯ ಪ್ರವಾಸೋದ್ಯಮ ಹಾಗೂ ಯುವಜನ ಸೇವಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆ ನರಹರಿ ಬೆಟ್ಟವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ?

ಆ) ಇದ್ದರೆ ಯಾವಾಗ ಈ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು?

ಶ್ರೀ ಓಂ ಪ್ರಕಾಶ್ ಕಣಗಲಿ (ಪ್ರವಾಸೋದ್ಯಮ ಹಾಗೂ ಯುವಜನ ಸೇವಾ ರಾಜ್ಯ ಸಚಿವರು) :

ಅ) ಹೌದು

ಆ) ಕರ್ನಾಟಕ ಪ್ರವಾಸೋದ್ಯಮ ನೀತಿಯಲ್ಲಿ ಈ ಸ್ಥಳವನ್ನು "ಬಿ" ಗುಂಪಿನಡಿಯಲ್ಲಿ ಸೇರಿಸಲಾಗಿದೆ. ಇಲ್ಲಿ ಪ್ರವಾಸೋದ್ಯಮ ಯೋಜನೆಗಳನ್ನು ಕೈಗೊಳ್ಳಲು ಮುಂದೆ ಬರುವ ಖಾಸಗಿ ಉದ್ಯಮಿಗಳಿಗೆ ಬಂಡವಾಳ ಹೂಡಿಕೆ ಮೇಲೆ ಶೇಕಡ 20 ಸಬ್ಸಿಡಿ ಹಾಗೂ ಇತರ ರಿಯಾಯಿತಿ ಮತ್ತು ಉತ್ತೇಜನಗಳನ್ನು ನೀಡಲಾಗುವುದು.

ಶಿಗ್ಗಾಂವ ತಾಲ್ಲೂಕಿನ ಪ್ರವಾಸಿ ಅಭಿವೃದ್ಧಿ ಕೇಂದ್ರಗಳ ಬಗ್ಗೆ

620 - ಶ್ರೀ ಮಂಜುನಾಥ ಸಿ. ಕುನ್ನೂರ್ (ಶಿಗ್ಗಾಂವ) : ಮಾನ್ಯ ಪ್ರವಾಸೋದ್ಯಮ ಹಾಗೂ ಯುವಜನ ಸೇವಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಗ್ಗಾಂವ ತಾಲ್ಲೂಕ್ ಶ್ರೀ ಶರೀಫ್ ಶಿವಯೋಗಿ ಸುಕ್ಷೇತ್ರ ಶಿಶುವಿನಹಾಳ, ಇದನ್ನು ಪ್ರವಾಸಿ ಅಭಿವೃದ್ಧಿ ಕೇಂದ್ರವೆಂದು ಪರಿಗಣಿಸಲಾಗಿದೆಯೇ?

ಆ) ಶಿಗ್ಗಾಂವ ತಾಲ್ಲೂಕು ಬಾಡ ಸುತ ಕನಕದಾಸರು ಹುಟ್ಟಿದ ಕ್ಷೇತ್ರವನ್ನು ಪ್ರವಾಸಿ ಅಭಿವೃದ್ಧಿ ಕೇಂದ್ರವೆಂದು ಗುರುತಿಸಲಾಗಿದೆಯೇ?

ಇ) ಶಿಗ್ಗಾಂವ ತಾಲ್ಲೂಕ್ ಗಂಗೆ ಬಾವಿ ಸುಕ್ಷೇತ್ರ ಪ್ರವಾಸಿ ಅಭಿವೃದ್ಧಿ ಸ್ಥಳವಾಗಿ ಪರಿಗಣಿಸಲಾಗುವುದೇ?

ಈ) ಹಾಗಿದ್ದಲ್ಲಿ ಸರ್ಕಾರದವರು ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು?

ಶ್ರೀ ಓಂ ಪ್ರಕಾಶ್ ಕಣಗಲಿ (ಪ್ರವಾಸೋದ್ಯಮ ಹಾಗೂ ಯುವಜನ ಸೇವಾ ರಾಜ್ಯ ಸಚಿವರು) :

ಅ) ಹೌದು

ಆ) ಹೌದು

ಇ) ಹೌದು